# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 145 | Pages. 2 | Date: 14-05-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 145 - ಪುಟಗಳು : 2 | 14-05-2026 | ಗುರುವಾರ | Ph: 8762954248 | ದರ : ₹1


# ನ್ಯೂಮೋನಿಯಾ ಸಾವಿಗೆ ಹೃದಯಾಘಾತದ ಕಥೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನ್ಯೂಮೋನಿಯಾ ಸಮಸ್ಯೆಯಿಂದ ವ್ಯಕ್ತಿ ಮೃತಪಟ್ಟಿದ್ದರೂ ಹೃದಯಾಘಾತದ ಕಥೆ ಕಟ್ಟಿದ್ದ ಮೈಸೂರಿನ ಜೆಎಸ್ಎಸ್ ಆಸ್ಪತ್ರೆಗೆ 5.25 ಲಕ್ಷ ರೂ. ದಂಡ ವಿಧಿಸಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶಿಸಿದೆ.

ನಗರದ ಹೆಚ್.ಎಲ್.ಭವಾನಿ ಅವರು ತಮ್ಮ ಗಂಡ ಹೆಚ್.ಬಿ.ರಾಜು ಅವರ ಸಾವಿಗೆ ವೈದ್ಯರೇ ಕಾರಣರೆಂದು ಆರೋಪಿಸಿ ನಷ್ಟ ಪರಿಹಾರ ಕೊಡಿಸಬೇಕೆಂದು ಆಯೋಗದ ಮೆಟ್ಟಿಲೇರಿದ್ದರು.

ಮೈಸೂರಿನ ಜೆಎಸ್ಎಸ್ ಆಸ್ಪತ್ರೆಯ ನಿರ್ದೇಶಕರು, ಮೂತ್ರಪಿಂಡ ತಜ್ಞ ಡಾ. ಮಂಜುನಾಥ ಎಸ್. ಶೆಟ್ಟಿ, ಡಾ. ಸಮರ್ಥ್ ಅವರಿಗೆ ದಂಡ ವಿಧಿಸಲಾಗಿದೆ. ಪ್ರಕರಣದ ನಾಲ್ಕನೇ ಎದುರುದಾರರಾಗಿದ್ದ ಹಾಸನದ ಸ್ವಾಸ್ಥ್ಯ ಕಿಡ್ನಿಕೇರ್ ಹಾಗು ಸಹ್ಯಾದ್ರಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಕರಣದಿಂದ ಕೈಬಿಡಲಾಗಿದೆ.

## ಪ್ರಕರಣದ ಪೂರ್ಣ ವಿವರ

ಹೆಚ್.ಬಿ.ರಾಜು ಅವರ ಅನಾರೋಗ್ಯ ಹಿನ್ನೆಲೆಯಲ್ಲಿ ನಗರದ ಸ್ವಾಸ್ಥ್ಯ ಕಿಡ್ನಿಕೇರ್‌ನಲ್ಲಿ ಮೊದಲು ತೋರಿಸಲಾಗಿತ್ತು. ಅಲ್ಲಿನ ವೈದ್ಯರ ಸೂಚನೆ ಮೇರೆಗೆ ಸಹ್ಯಾದ್ರಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಮೂರು ದಿನ ಒಳರೋಗಿಯಾಗಿ ದಾಖಲಿಸಲಾಗಿತ್ತು. ಕೆಲ ದಿನಗಳ ಬಳಿಕ ಮೂತ್ರ ಕೋಶದಲ್ಲಿ ಸಮಸ್ಯೆ ಕಂಡುಬಂದ ಹಿನ್ನೆಲೆಯಲ್ಲಿ ಸಹ್ಯಾದ್ರಿ ಆಸ್ಪತ್ರೆಯ ವೈದ್ಯರು ಮೈಸೂರಿನ ಜೆಎಸ್ಎಸ್ ಆಸ್ಪತ್ರೆಗೆ ಶಿಫಾರಸ್ಸು ಮಾಡಿದ್ದರು. ವೈದ್ಯರ ನಿರ್ದೇಶನದಂತೆ ರಾಜು ಅವರನ್ನು ಮೈಸೂರಿಗೆ ಕರೆದೊಯ್ಯಲಾಗಿತ್ತು.

ಅಲ್ಲಿ ರೋಗಿಯ ಪರೀಕ್ಷೆ ನಡೆಸಿದ್ದ ವೈದ್ಯರು ದೀರ್ಘ ಕಾಲದ




## ಜೆಎಸ್ಎಸ್ ಆಸ್ಪತ್ರೆಗೆ ದಂಡ

ಮೂತ್ರಪಿಂಡ ಕಾಯಿಲೆಯಿಂದ ಬಳಲುತ್ತಿದ್ದು, ಹಂತ ಹಂತವಾಗಿ ಸುಧಾರಣೆ ಆಗಲಿದೆ ಎಂದಿದ್ದರು. 2023ರ ಜ. 9ರಂದು ರಾಜು ಅವರಿಗೆ ತೀವ್ರ ಹೊಟ್ಟೆ ನೋವು ಕಾಣಿಸಿಕೊಂಡಾಗ ನರ್ಸ್ ಹೊಟ್ಟೆ ನೋವಿನ ಕಾರಣ ಅರಿಯದೆ ನೋವು ನಿವಾರಕ ಚುಚ್ಚುಮದ್ದು ನೀಡಿ ಖಾಯಿಲೆ ಗಂಭೀರ ಸ್ವರೂಪಕ್ಕೆ ತಿರುಗುವಂತೆ ಮಾಡಿದರು. ಮಾರನೇ ದಿನ ವೈದ್ಯರು ಪರೀಕ್ಷಿಸಿ ಫಿಸಿಯೋಥೆರಪಿ ಮಾಡಿಸಿದರು. ಈ ವೇಳೆ ಊಟದ ಕಣಗಳು ಶ್ವಾಸಕೋಶಕ್ಕೆ ಸೇರಿದ್ದರಿಂದ ಶ್ವಾಸಕೋಶ ಮತ್ತು ಇನ್ನಿತರ ಅಂಗಗಳು ತೀವ್ರ ತರದ ಸೋಂಕಿಗೆ ಒಳಗಾಗಿ ರೋಗಿಗೆ ನ್ಯೂಮೋನಿಯಾ ಉಂಟಾಗಿ ಎರಡು ದಿನಗಳ ಬಳಿಕ ರಾಜು ಮೃತಪಟ್ಟಿದ್ದರು. ಈ ವೇಳೆ ರೋಗಿ ನ್ಯುಮೋನಿಯಾದಿಂದ ಮೃತಪಟ್ಟಿದ್ದರೂ ಹೃದಯಾಘಾತದಿಂದ ಸಾವು ಸಂಭವಿಸಿದೆ ಎಂದು ಸುಳ್ಳು ಹೇಳಲಾಗಿತ್ತು.

ವೈದ್ಯರ ನಿರ್ಲಕ್ಷ್ಯದಿಂದಲೇ ತಮ್ಮ ಪತಿ ನಿಧನರಾಗಿದ್ದಾರೆ ಎಂದು ಭವಾನಿ ಅವರು 2025ರ ಫೆ. 21ರಂದು 50 ಲಕ್ಷ ರೂ. ಸೇವಾ ನ್ಯೂನ್ಯತೆ

### ಗ್ರಾಹಕರ ವ್ಯಾಜ್ಯಗಳ ಆಯೋಗ ಆದೇಶ ಮಹಿಳೆಗೆ ಕಾನೂನು ಹೋರಾಟದಲ್ಲಿ ಜಯ

ಪರಿಹಾರ ಕೊಡಿಸಬೇಕೆಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮೆಟ್ಟಿಲೇರಿದ್ದರು.

ಪ್ರಕರಣ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷೆ ಸಿ.ಎಂ.ಚಂಚಲ ಹಾಗೂ ಸದಸ್ಯೆ ಆರ್.ಅನುಪಮಾ ಅವರ ಪೀಠವು, ವಾದ ಪ್ರತಿವಾದ ಆಲಿಸಿ ಆದೇಶ ಪ್ರಕಟಿಸಿದೆ.

ವಿಚಾರಣೆ ವೇಳೆ ಮೈಸೂರಿನ ಜೆಎಸ್ಎಸ್ ಆಸ್ಪತ್ರೆಯ ವೈದ್ಯರು, ರಾಜು ಅವರು ಈ ಹಿಂದೆ ಹಾಸನದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದು ಆರೋಗ್ಯ ಹದಗೆಟ್ಟಿದ್ದರಿಂದ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿಗೆ ಕಳುಹಿಸಿಕೊಟ್ಟಿದ್ದರು. ರಾಜು ಅವರ ಹೃದಯ ಬಡಿತ ಕಡಿಮೆಯಾದ್ದರಿಂದ ಸೂಕ್ತ ಚಿಕಿತ್ಸಾ ಕ್ರಮ ಕೈಗೊಂಡಿದ್ದರೂ ಸಾವನ್ನಪ್ಪಿದ್ದಾರೆ. ಈ ಘಟನೆಯಲ್ಲಿ ತಮ್ಮಿಂದ ಯಾವ ಲೋಪದೋಷಗಳಾಗಿಲ್ಲವೆಂದು ವಾದ ಮಂಡಿಸಿದ್ದರು.

ವಾದ-ವಿವಾದ ಹಾಗು ಹಾಜರುಪಡಿಸಿದ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಿದ ಪೀಠವು, ದಾಖಲಾತಿಗಳ ಪ್ರಕಾರ ಹೃದಯ ಸ್ತಂಭನದಿಂದ ಮರಣ ಸಂಭವಿಸಿಲ್ಲ. ಜೆಎಸ್ಎಸ್ ಆಸ್ಪತ್ರೆಯ ಕೇಸ್ ಶೀಟ್‌ನಲ್ಲಿ ಆಸ್ಪಿರೇಷನ್ ವಿವರ ಮತ್ತು ಚಿಕಿತ್ಸೆ ವಿಧಾನ ದಾಖಲಿಸದ ಕಾರಣ ನಮೂದಿಸಿದ ವಿವರಕ್ಕೂ ಮರಣದ ಕಾರಣಕ್ಕೂ ತಾಳೆಯಾಗದ ಹಿನ್ನಲೆಯಲ್ಲಿ ವೈದ್ಯರ ನಿರ್ಲಕ್ಷ್ಯಕ್ಕೆ ಆಸ್ಪತ್ರೆಯನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆಂದು ಆಯೋಗ ಸ್ಪಷ್ಟಪಡಿಸಿದೆ. 45 ದಿನಗಳ ಒಳಗೆ ಸೇವಾ ನ್ಯೂನ್ಯತೆಗಾಗಿ 5 ಲಕ್ಷ ರೂ., ಮಾನಸಿಕ ಹಿಂಸೆಗಾಗಿ 25 ಸಾವಿರ ರೂ. ದೂರುದಾರರಿಗೆ ನೀಡಬೇಕೆಂದು ಏ. 22ರಂದು ಆದೇಶಿಸಲಾಗಿದೆ.

# ವಿದ್ಯಾರ್ಥಿಗಳು ಅಧ್ಯಯನ ಜೊತೆಗೆ ಕ್ರೀಡೆಯಲ್ಲಿ ಪಾಲ್ಗೊಳ್ಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ವಿದ್ಯಾರ್ಥಿಗಳು ಪಠ್ಯ ಪುಸ್ತಕ ಅಧ್ಯಯನ ಜೊತೆಗೆ ಕ್ರೀಡಾಕೂಟಗಳಲ್ಲಿ ಭಾಗವಹಿಸಿದರೆ ದೈಹಿಕ ಮತ್ತು ಮಾನಸಿಕವಾಗಿ ಸದೃಢಗೊಳ್ಳಲು ಸಾಧ್ಯವಾಗುತ್ತದೆ. ಅಂಕ ಗಳಿಕೆಗಷ್ಟೇ ಮಕ್ಕಳು ಸೀಮಿತರಾಗಬಾರದು ಎಂದು ಪುರಸಭೆ ಅಧ್ಯಕ್ಷ ಅಕ್ರಂ ಷರೀಫ್ ಹೇಳಿದರು.

ಪಟ್ಟಣದ ವೈಡಿಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ಪಟ್ಟಣದ ಜೂನಿಯರ್ ಕಾಲೇಜು ವೈದಾನದಲ್ಲಿ ಬುಧವಾರ ಆಯೋಜಿಸಿದ್ದ ಹಾಸನ ವಿಶ್ವವಿದ್ಯಾಲಯ ಮಟ್ಟದ ಅಂತರ ಕಾಲೇಜು ಪುರುಷರ ವಿಭಾಗದ ವಾಲಿಬಾಲ್ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾಭ್ಯಾಸದ ಸಂದರ್ಭ ಕ್ರೀಡೆ ವಿದ್ಯಾರ್ಥಿಗಳ



ಪಾಲಿಗೆ ಅತಿಮುಖ್ಯವಾಗಿದೆ. ಓದಿನ ಜೊತೆಗೆ ದೈಹಿಕ ಸದೃಢತೆಗೆ ಕ್ರೀಡೆ ಪ್ರಯೋಜನವಾಗುತ್ತದೆ. ಅಲ್ಲದೆ ವಿದ್ಯಾರ್ಥಿಗಳು ವಿದ್ಯೆಯ ಜೊತೆ ಕ್ರೀಡೆ ಸೇರಿ ಸಾಂಸ್ಕೃತಿಕ ಚಟುವಟುಕೆಗಳಲ್ಲೂ ಭಾಗವಹಿಸಬೇಕೆಂದರು.

ಇತ್ತೀಚಿನ ದಿನಗಳಲ್ಲಿ ಕ್ರೀಡಾ ಕೋಟಾದಲ್ಲಿ ಸರ್ಕಾರಿ ನೌಕರಿ ಹಾಗೂ ವಿವಿಧ ವೃತ್ತಿಗಳಲ್ಲಿ ಅವಕಾಶ ಪಡೆಯಬಹುದಾಗಿದೆ. ಪುರಸಭೆಯಿಂದ ಉತ್ತಮ ಕ್ರೀಡಾಪಟುಗಳಿಗೆ ಉತ್ತೇಜನ ನೀಡಲಾಗುವುದು. ಅಲ್ಲದೆ ಈ ಕ್ರೀಡಾಕೂಟ ಉದ್ಘಾಟಿಸುದ್ದು ಖುಷಿ ತಂದಿದೆ ಎಂದರು.

ವೈಡಿಡಿ ಪ್ರಥಮ ದರ್ಜೆ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಹೆಬ್ಬಾಳು ಹಾಲಪ್ಪ ಮಾತನಾಡಿ, ವೈಡಿಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುತ್ತಿದೆ. ಹಾಸನ ವಿಶ್ವವಿದ್ಯಾಲಯದ ಕ್ರೀಡಾಕೂಟದಲ್ಲಿ ವೈಡಿಡಿ ಕಾಲೇಜು ವಿದ್ಯಾರ್ಥಿಗಳು ಪ್ರಶಸ್ತಿ ಪಡೆದಿರುವುದು ಹೆಮ್ಮೆಯ ವಿಷಯ. ಕ್ರೀಡೆಯ ಜೊತೆಗೆ ವಿದ್ಯಾಭ್ಯಾಸದಲ್ಲೂ ಮುಂದಾಗಿ ವಿದ್ಯಾರ್ಥಿಗಳು ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಪ್ರಾಂಶುಪಾಲ ಡಾ.ಮಹೇಶ್ ಮಾತನಾಡಿ, ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಇತ್ತೀಚಿನ ದಿನಗಳಲ್ಲಿ ಫಲಿತಾಂಶದಲ್ಲಿ ಪ್ರಥಮ ಸ್ಥಾನ ಮತ್ತು ಕ್ರೀಡಾಕೂಟದಲ್ಲಿ ಚಾಂಪಿಯನ್ ಶಿಪ್ ಪಡೆದಿದ್ದಾರೆ. ಆದರೂ ಕೆಲವರು ಕಾಲೇಜಿನ ಬಗ್ಗೆ ಇಲ್ಲಸಲ್ಲದ ಅಪವಾದ ಮಾಡುವುದು ಬೇಸರ ತರಿಸಿದೆ. ಇತ್ತೀಚೆಗೆ ಬಂದಿರುವ ಕಾಲೇಜು ಅಭಿವೃದ್ಧಿ ಸಮಿತಿಯವರ ಪ್ರೋತ್ಸಾಹ ಹೆಚ್ಚಿದ್ದು, ಎಲ್ಲರ ಸಹಕಾರದೊಂದಿಗೆ ಇಂತಹ ಕ್ರೀಡಾಕೂಟಗಳನ್ನು ಆಯೋಜಿಸಲು ಸಾಧ್ಯವಾಗಿದೆ ಎಂದರು.

# ಮಳೆಗಾಲಕ್ಕೂ ಮೊದಲೇ ಪೌರ ಕಾರ್ಮಿಕರಿಗೆ ವಸತಿ ಸೌಲಭ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ಪೌರಕಾರ್ಮಿಕರ ವಸತಿ ನಿರ್ಮಾಣ ಕಾಮಗಾರಿಗೆ ಚಾಲನೆ ದೊರೆತಿದ್ದು, ಮಳೆಗಾಲ ಆರಂಭಕ್ಕೂ ಮುನ್ನ ಪೌರಕಾರ್ಮಿಕರಿಗೆ ಸೂರು ಕಲ್ಪಿಸಲು ಪ್ರಯತ್ನ ಮಾಡುತ್ತೇನೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಕುಶಾಲನಗರದಲ್ಲಿ ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ನಿರ್ಮಾಣವಾಗುತ್ತಿರುವ ಪೌರ ಕಾರ್ಮಿಕರ ವಸತಿ ಸಮುಚ್ಚಯಕ್ಕೆ ಭೇಟಿ ನೀಡಿ ಅವರು ಕಾಮಗಾರಿಯನ್ನು ಪರಿಶೀಲಿಸಿದರು.

ದಶಕಗಳಿಂದ ಕುಂಟುತ್ತಾ ಸಾಗುತ್ತಿದ್ದ ವಸತಿ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸುವ ಉದ್ದೇಶದಿಂದ ವಸತಿ ಸಚಿವ ಜಮೀರ್



ಅಹ್ಮದ್ ಅವರನ್ನು ಭೇಟಿಯಾಗಿ ಕಾಮಗಾರಿ ಪುನರಾರಂಭಕ್ಕೆ ಮನವಿ ಮಾಡಲಾಗಿತ್ತು ಎಂದು ತಿಳಿಸಿದರು.

ತಮ್ಮ ಮನವಿಗೆ ಸ್ಪಂದಿಸಿದ ಸಚಿವರು ಗುತ್ತಿಗೆದಾರರಿಗೆ ಕಾಮಗಾರಿ ಮರುಪ್ರಾರಂಭಿಸಲು ಸೂಚನೆ ನೀಡಿದ್ದು, ಕಳೆದ ಮೂರು ದಿನಗಳಿಂದ ಕಾಮಗಾರಿ ಮತ್ತೆ ಆರಂಭಗೊಂಡಿದೆ ಎಂದು ಹೇಳಿದರು. ಮಳೆಗಾಲ ಆರಂಭಕ್ಕೂ ಮುನ್ನವೇ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

ಪ್ರತಿದಿನ ಬೆಳಗ್ಗಿನ ಜಾವ ಎದ್ದು ಪಟ್ಟಣವನ್ನು ಸ್ವಚ್ಛವಾಗಿಡುವ ಪೌರಕಾರ್ಮಿಕರು ಹಲವು ವರ್ಷಗಳಿಂದ ಗುಡಿಸಲು ಹಾಗೂ ತಾತ್ಕಾಲಿಕ ಕುಟೀರಗಳಲ್ಲಿ ಹಾವು-ಚೇಳುಗಳ ಭಯದ ನಡುವೆ ಜೀವನ ಸಾಗಿಸುತ್ತಿದ್ದಾರೆ. ಇಂತಹ ಕಾರ್ಮಿಕರಿಗೆ ಸುರಕ್ಷಿತ ಮತ್ತು ಶಾಶ್ವತ ವಸತಿ ಕಲ್ಪಿಸುವುದು ಸರ್ಕಾರ ಹಾಗೂ ಜನಪ್ರತಿನಿಧಿಗಳ ಆದ್ಯ ಕರ್ತವ್ಯವಾಗಬೇಕು ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಒಟ್ಟು 63 ಮನೆಗಳ ನಿರ್ಮಾಣಕ್ಕೆ ಚಾಲನೆ ನೀಡಲಾಗಿದ್ದು, ಕಾಮಗಾರಿ ವಿಳಂಬವಾಗುತ್ತಿದ್ದ ಹಿನ್ನೆಲೆಯಲ್ಲಿ ಕೆಲ ಪೌರಕಾರ್ಮಿಕರು ತಮ್ಮ ಪಾಲಿನ ಮನೆಗಳನ್ನು ಸ್ವಂತ ಖರ್ಚಿನಲ್ಲಿ ಪೂರ್ಣಗೊಳಿಸಿ ಈಗಾಗಲೇ ವಾಸವಾಗಿದ್ದಾರೆ ಎಂದು ತಿಳಿಸಿದರು. ಇನ್ನೂ ಅನೇಕ ಪೌರಕಾರ್ಮಿಕರು ಕೌಡಳ್ಳಿ ಸಮೀಪದ ಗುಡಿಸಲು ಪ್ರದೇಶಗಳಲ್ಲಿ ವಾಸಿಸುತ್ತಿದ್ದು, ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಎಲ್ಲರಿಗೂ ವಸತಿ ಸೌಲಭ್ಯ ಕಲ್ಪಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

ಪೌರ ಕಾರ್ಮಿಕರ ಮುಖಂಡ ಪಳನಿ, ಕೊಳಚೆ ನಿರ್ಮೂಲನಾ ಮಂಡಳಿ ಇಂಜಿನಿಯರ್ ಜ್ಯೋತ್ಸ್ನಾ ಹಾಗೂ ಗುತ್ತಿಗೆದಾರ ಪವನ್ ಉಪಸ್ಥಿತರಿದ್ದರು.

# ಕೊರಲಗದ್ದೆ ಕಾಫಿ ಎಸ್ಟೇಟ್‌ನಲ್ಲಿ ಕಾಡಾನೆಗಳ ಹಿಂಡು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲೂಕಿನ ಅರೇಹಳ್ಳಿ ಹೋಬಳಿಯ ಕೊರಲಗದ್ದೆ ಗ್ರಾಮದಲ್ಲಿ ಕಾಡಾನೆಗಳ ಹಾವಳಿ ಮತ್ತೆ ಶುರುವಾಗಿದ್ದು, 20ಕ್ಕೂ ಹೆಚ್ಚು ಕಾಡಾನೆಗಳ ಹಿಂಡು ಮರಿಗಳ ಸಮೇತ ಕಾಫಿ ಎಸ್ಟೇಟ್ ಪ್ರದೇಶದಲ್ಲಿ ಸಂಚರಿಸಿರುವ ಘಟನೆ ಗ್ರಾಮಸ್ಥರಲ್ಲಿ ಆತಂಕ ಹುಟ್ಟಿಸಿದೆ.

ಗ್ರಾಮದ ಸಮೀಪದ ಕಾಫಿ ತೋಟಗಳಲ್ಲಿ ಕಾಣಿಸಿಕೊಂಡ ಹಿಂಡು, ಒಂದು ಎಸ್ಟೇಟ್‌ನಿಂದ ಮತ್ತೊಂದು ಎಸ್ಟೇಟ್‌ಗೆ ತೆರಳುವ ವೇಳೆ ಮುಖ್ಯ ರಸ್ತೆಯನ್ನು ದಾಟಿದೆ. ಈ ಸಂದರ್ಭದಲ್ಲಿ ಎಸ್ಟೇಟ್‌ನ ಗೇಟ್‌ನ್ನು ಮುರಿದು ಆನೆಗಳು ಗುಂಪಾಗಿ ಸಾಗಿರುವ ದೃಶ್ಯ ಸ್ಥಳೀಯರ ಮೊಬೈಲ್‌ನಲ್ಲಿ ಸೆರೆಯಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.

ಒಂದರ ಹಿಂದೊಂದು ಸರದಿಯಾಗಿ ಸಾಗಿದ ಕಾಡಾನೆಗಳ ಹಿಂಡು ನೋಡಲು ಅಚ್ಚರಿಯಾಯಿತಾದರೂ, ಗ್ರಾಮಸ್ಥರು ಭಯ ಭೀತರಾಗಿದ್ದಾರೆ. ವಿಶೇಷವಾಗಿ ಮರಿಗಳೂ ಹಿಂಡಿನಲ್ಲಿದ್ದ ಕಾರಣ ಆನೆಗಳು ಹೆಚ್ಚು ಆಕ್ರಮಣಕಾರಿ ಸ್ವಭಾವ ತೋರಬಹುದೆಂಬ ಆತಂಕ ಜನರಲ್ಲಿ ಮೂಡಿದೆ.

ರಾತ್ರಿ ಸಮಯದಲ್ಲಿ ತೋಟದ ಕಾರ್ಮಿಕರು ಹಾಗೂ ರೈತರು ಹೊರಗೆ ತೆರಳಲು ಹೆದರುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಶಾಲಾ ಮಕ್ಕಳು ಮತ್ತು ಸಾರ್ವಜನಿಕರ ಸುರಕ್ಷತೆ ಬಗ್ಗೆ ಪೋಷಕರು ಕಳವಳ ವ್ಯಕ್ತಪಡಿಸಿದ್ದಾರೆ. ಆನೆಗಳು ತೋಟಗಳಿಗೆ ನುಗ್ಗಿ ಬೆಳೆ ಹಾನಿ ಮಾಡುವ ಸಾಧ್ಯತೆಯೂ ಹೆಚ್ಚಾಗಿದೆ ಎಂದು ರೈತರು ಹೇಳಿದ್ದಾರೆ.

ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಕಾಡಾನೆಗಳ ಚಲನವಲನದ ಮೇಲೆ ನಿಗಾ ವಹಿಸಬೇಕು. ಜೊತೆಗೆ ಗ್ರಾಮಸ್ಥರಿಗೆ ಮುನ್ನೆಚ್ಚರಿಕೆ ಸೂಚನೆ ನೀಡುವ ಕೆಲಸ ತುರ್ತಾಗಿ ನಡೆಯಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಕಳೆದ ಕೆಲವು ತಿಂಗಳುಗಳಿಂದ ಅರೇಹಳ್ಳಿ ಭಾಗದಲ್ಲಿ ಕಾಡಾನೆಗಳ ಸಂಚಾರ ಹೆಚ್ಚಾಗುತ್ತಿದ್ದು, ಮಾನವಆನೆ ಸಂಘರ್ಷ ತಡೆಗಟ್ಟಲು ಶಾಶ್ವತ ಪರಿಹಾರ ಕಂಡುಹಿಡಿಯಬೇಕೆಂಬ ಆಗ್ರಹವೂ ಕೇಳಿಬರುತ್ತಿದೆ.

# ಜಿಪಂ ಸಿಇಒ ಆಗಿ ಶುಭಂ ಶುಕ್ಲಾ ಅಧಿಕಾರ ಸ್ವೀಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾಗಿ 2022ರ ಬ್ಯಾಚ್‌ನ ಐಎಎಸ್ ಅಧಿಕಾರಿ ಶುಭಂ ಶುಕ್ಲ ಬುಧವಾರ ಅಧಿಕಾರ ಸ್ವೀಕರಿಸಿದರು.

ಬಿ.ಆರ್.ಪೂರ್ಣಿಮಾ ಅವರನ್ನು ವರ್ಗಾವಣೆ ಮಾಡಿರುವ ಸರ್ಕಾರ ಆ ಸ್ಥಾನಕ್ಕೆ ಶುಕ್ಲಾ ಅವರನ್ನು ನೇಮಿಸಿದೆ. ಶುಕ್ಲಾ ಅವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಅವರ ಪತಿ. ಮೊದಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನ ಕಾರ್ಯದರ್ಶಿ, ನಂತರ ಹಾವೇರಿ ಜಿಲ್ಲೆ ಸವಣೂರಿನಲ್ಲಿ ಹಿರಿಯ ಉಪ ವಿಭಾಗಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದಾರೆ. ಮೂಲತಃ ಮಧ್ಯ ಪ್ರದೇಶದ ರೇವಾ ಜಿಲ್ಲೆಯವರಾದ ಶುಕ್ಲಾ 2021 ರ ಯುಪಿಎಸ್‌ಸಿ ಪರೀಕ್ಷೆಯಲ್ಲಿ 43ನೇ ರ್‍ಯಾಂಕ್ ಪಡೆದಿದ್ದಾರೆ. ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರ ಹಸ್ತಾಂತರಿಸಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಹಾಗೂ ಅಭಿವೃದ್ಧಿಗೆ



ಹೆಚ್ಚಿನ ಒತ್ತು ನೀಡಲಾಗುವು ದು ಎಂದು ಜಿಲ್ಲಾ ಪಂಚಾಯಿತಿ ನೂತನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ತಿಳಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಇಂದು ಅಧಿಕಾರ ವಹಿಸಿಕೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಪ್ರಗತಿ ಸಾಧಿಸಲಾಗುವುದು. ಜಿಲ್ಲಾಡಳಿತ ಹಾಗೂ ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳೊಂದಿಗೆ ಸಮನ್ವಯತೆ ಸಾಧಿಸಿ, ಎಲ್ಲರ ಸಹಕಾರದಿಂದ ಒಳ್ಳೆಯ ಕೆಲಸ ಮಾಡುವುದಾಗಿ ತಿಳಿಸಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಈಗಾಗಲೇ ಸರ್ಕಾರದಿಂದ ಎಲ್ಲಾ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಹಾಗೂ ಉಪವಿಭಾಗಾಧಿ ಕಾರಿಗಳಿಗೆ ಮಾರ್ಗದರ್ಶನ ಬಂದಿದೆ. ಕುಡಿಯುವ ನೀರಿನ ಸಮಸ್ಯೆಯಾಗದಂತೆ ಎಚ್ಚರವಹಿಸಲು ಸೂಚನೆ ನೀಡಲಾಗಿದೆ ಅದರಂತೆ ಎಲ್ಲಾ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಜಿಲ್ಲಾಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಟಾಸ್ಕ್‌ಫೋರ್ಸ್ ಇದ್ದು, ಅದರ ಮೂಲಕ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲೂ ಟಾಸ್ಕ್‌ಫೋರ್ಸ್ ರಚಿಸಿ, ಚರ್ಚಿಸಿ ಸರ್ಕಾರದ ಮಾರ್ಗದರ್ಶನ, ನಿಯಮಾವಳಿ ಪ್ರಕಾರ ಖಾಸಗಿ ಬೋರ್‌ವೆಲ್‌ಗಳು ಅಥವಾ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುವುದು. ಜಿಲ್ಲೆಯ ಯಾವುದೇ ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಗಮನ ಹರಿಸಲಾಗುವುದು ಎಂದು ತಿಳಿಸಿದರು.

# ಆಕಸ್ಮಿಕ ಬೆಂಕಿಗೆ 3 ಮನೆಗಳು ಆಹುತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಆಕಸ್ಮಿಕ ಬೆಂಕಿ ತಗುಲಿ 3 ಮನೆಗಳು ಸಂಪೂರ್ಣ ಸುಟ್ಟು ಧವಸ ಧಾನ್ಯ, ಪಾತ್ರೆ, ಬಟ್ಟೆ ಬರೆ, ಚಿನ್ನ ಹಾಗೂ ಲಕ್ಷಾಂತರ ರೂ. ಬೆಲೆ ಬಾಳುವ ಆಸ್ತಿಪಾಸ್ತಿ ನಾಶವಾಗಿರುವ ಘಟನೆ ಬುಧವಾರ ತಾಲೂಕಿನ ಪಾಳ್ಯ ಹೋಬಳಿ ಕಣದಳ್ಳಿ ಗ್ರಾಮದಲ್ಲಿ ನಡೆದಿದೆ.

ಏಕಾಏಕಿ ಒಂದು ಮನೆಗೆ ಬೆಂಕಿ ಕಾಣಿಸಿಕೊಂಡಿದೆ. ಎಚ್ಚೆತ್ತುಕೊಂಡ ಕುಟುಂಬಗಳು ಮನೆಗಳಿಂದ ಹೊರ ಬಂದು ಕೂಗಿದಾಗ ಕೂಗಳತೆ ದೂರದಲ್ಲಿ ಗ್ರಾಮಸ್ಥರು ಓಡಿ ಬಂದು ಬೆಂಕಿ ನಂದಿಸಲು ಪ್ರಯತ್ನ ಮಾಡಿದರೂ ಏನು ಪ್ರಯೋಜನವಾಗದೆ ಪಕ್ಕದಲ್ಲಿರುವ ಮನೆಗಳಿಗೂ ಬೆಂಕಿ ಆವರಿಸಿ ಮೂರು ಮನೆಗಳು ಸಂಪೂರ್ಣ ಸುಟ್ಟು ಹೋಗಿವೆ.

ಸುದ್ದಿ ತಿಳಿದ ಕೂಡಲೆ ಅಗ್ನಿಶಾಮಕ ಸಿಬ್ಬಂದಿ ಗ್ರಾಮಕ್ಕೆ ಆಗಮಿಸಿ ಬೆಂಕಿಯನ್ನು ನಂದಿಸಲು ಹರಸಾಹಸ ಪಟ್ಟರು. ಗ್ರಾಮದ ಈರೇಗೌಡ ಚಂದ್ರೇಗೌಡ, ಸಣ್ಣಪ್ಪಗೌಡ, ಎಂಬವರು ಮನೆಗಳನ್ನು ಕಳೆದುಕೊಂಡವರು.

ಮನೆಯಲ್ಲಿ ಸಂಗ್ರಹಿಸಿಟ್ಟದ್ದ ದವಸ ಧಾನ್ಯ, ಬಟ್ಟೆ, ಮನೆ ಸಾಮಗ್ರಿಗಳು, ಬಂಗಾರ ಆಭರಣಗಳು ಹಾಗೂ ದುಡಿದು ಸಂಗ್ರಹಿಸಿಟ್ಟಿದ್ದ ನಗದು ಹಣ ಸೇರಿ ಲಕ್ಷಾಂತರ ರೂ. ಹಾನಿಯಾಗಿದೆ.

ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಶಾಸಕ ಸಿಮೆಂಟ್ ಮಂಜು ರವರು ನಿರಾಶ್ರಿತಗೊಂಡ ಕುಟುಂಬಗಳಿಗೆ ಸರ್ಕಾರದಿಂದ ಪರಿಹಾರ ಒದಗಿಸುವ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ತಾಲೂಕು ಜೆಡಿಎಸ್ ಅಧ್ಯಕ್ಷ ಕೆ.ಎಸ್. ಮಂಜೇಗೌಡ, ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಹನುಮಂತೇಗೌಡ, ಗ್ರಾಮ ಲೆಕ್ಕಾಧಿಕಾರಿ ಮನು ಮುಂತಾದವರು ಹಾಜರಿದ್ದರು.

# ಮಲ್ಲಿಪಟ್ಟಣ ಏತ ನೀರಾವರಿ ಯೋಜನೆ ವಿಳಂಬಕ್ಕೆ ಆಕ್ರೋಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ತಾಲ್ಲೂಕಿನ ಬಹು ನಿರೀಕ್ಷಿತ ಮಲ್ಲಿಪಟ್ಟಣ ಏತನೀರಾವರಿ ಯೋಜನೆ ಮೊದಲ ಹಂತದ ಕಾಮಗಾರಿ ಆರಂಭಗೊಂಡು 7 ವರ್ಷವಾದರೂ ಕಾಮಗಾರಿ ಪೂರ್ಣಗೊಂಡು ಕೆರೆ ಕಟ್ಟೆಗಳಿಗೆ ನೀರು ತುಂಬಿಸುವ ಕೆಲಸ ಆಗಿಲ್ಲ. ಅದಕ್ಕೆ ಗುತ್ತಿಗೆದಾರ ಮತ್ತು ಇಂಜಿನಿಯರ್‌ಗಳ ನಿರ್ಲಕ್ಷ್ಯವೇ ಕಾರಣವೆಂದು ಶಾಸಕ ಎ.ಮಂಜು ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕಿನ ಗಡಿಭಾಗ ಕೊಡಗು ಜಿಲ್ಲೆಯ ಕಟ್ಟೇಪುರ ಹೇಮಾವತಿ ಹಿನ್ನೀರಿನಲ್ಲಿ ನಡೆಯುತ್ತಿರುವ ನೂತನ ಮಲ್ಲಿಪಟ್ಟಣ ಏತನೀರಾವರಿ ಯೋಜನೆ ಜಾಕ್ ವೆಲ್ ಕಾಮಗಾರಿಯನ್ನು ಮಂಗಳವಾರ ವೀಕ್ಷಿಸಿ ಮಾತನಾಡಿದ ಅವರು, 2025ರ ಜನವರಿ 20ರಂದು ಕಾಮಗಾರಿ ವೀಕ್ಷಣೆ ಮಾಡುವ ವೇಳೆ ಆಗಸ್ಟ್ ತಿಂಗಳಿಗೆ ಕಾಮಗಾರಿ ಪೂರ್ಣಗೊಳಿಸುವ ಭರವಸೆ ನೀಡಿದ್ದರು. ಈ ವೇಳೆಗೂ ಆಗಿಲ್ಲ. ಪುನಃ ಏ. 18ರಂದು ಕಾಮಗಾರಿ ಸ್ಥಳ ಪರಿಶೀಲನೆ ಕೈಗೊಂಡಾಗಲೂ ಕೂಡ ಅಕ್ಟೋಬರ್‌ಗೆ ನೀರು ಹರಿಸುವ ಭರವಸೆಯನ್ನು ಅಧಿಕಾರಿಗಳು ನೀಡಿದ್ದರು. ಆದರೆ 2026ರ ಮೇ ತಿಂಗಳು ಬಂದರೂ ಸಹ ಕೆಲಸ ಪೂರ್ಣಗೊಳಿಸಿಲ್ಲ. ಈ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲವೆಂದು ಎಚ್ಚರಿಸಿದರು.

ಈ ಯೋಜನೆಯು 190 ಕೋಟಿ ರೂ. ವೆಚ್ಚದಲ್ಲಿ 200 ಕೆರೆಗಳಿಗೆ ನೀರು ತುಂಬಿಸುವುದಾಗಿದೆ. ಸುಮಾರು 78.10 ಕಿ.ಮೀ. ದೂರ ರೇಸಿಂಗ್ ಮೇನ್ ಪೈಪ್ ಲೈನ್ ಕಾಮಗಾರಿ ಬಹುತೇಕ ಮುಗಿಯುವ ಹಂತಕ್ಕೆ ಬಂದಿದೆ. 1.2 ಕಿ.ಮೀ. ಕೆಲಸ ಬಾಕಿ ಇದೆ. ವಿದ್ಯುತ್ ಸಂಪರ್ಕ, ತೊಟ್ಟಿ ಕೆಲಸವನ್ನು ಕೂಡಲೇ ಪೂರ್ಣಗೊಳಿಸಿ ಈ ಯೋಜನೆ ವ್ಯಾಪ್ತಿಗೆ ಒಳಪಡುವ 78 ಹಳ್ಳಿಗಳ ಕೆರೆ ಕಟ್ಟೆಗಳಿಗೆ ನೀರು ತುಂಬಿಸುವ ಕೆಲಸ ಕೈಗೊಳ್ಳುವಂತೆ ಸೂಚನೆ ನೀಡಿದರು.

ಸೋಮವಾರಪೇಟೆ ತಾಲ್ಲೂಕಿನ 20 ಕೆರೆ ಕಟ್ಟೆಗಳು ಸಹ ಸೇರಿವೆ. ಅಂದು ಆರಂಭಿಕವಾಗಿ ರಾಜ್ಯ ಸರ್ಕಾರ 120 ಕೋಟಿ ರೂ. ಬಿಡುಗಡೆ ಮಾಡಿ ಕಾಮಗಾರಿಯನ್ನು 18 ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರೊಂದಿಗೆ ಕರಾರು ಮಾಡಿಕೊಂಡಿತ್ತು.

ಆದರೆ ಕೆಲಸ ಮಾತ್ರ ಕೇವಲ ಪೈಪ್ ಲೈನ್ ಅಳವಡಿಕೆಯಲ್ಲಿಯೇ ಸಾಗಿತ್ತು. ಹಿನ್ನೀರಿನಲ್ಲಿ ಜಾಕ್‌ವೆಲ್ ನಿರ್ಮಾಣ ಕೆಲಸ ಮುಗಿದಿದ್ದು, ಮೋಟಾರ್ ಅಳವಡಿಕೆ ಕೆಲಸ ಪ್ರಗತಿಯಲ್ಲಿದೆ. ಬಾಕಿ ಕೆಲಸವನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ತಿಳಿಸಿದರು.

ಕಟ್ಟೇಪುರ ಪೈಪ್‌ಲೈನ್ ಅಳವಡಿಕೆಯ ಕೆಲವು ಭಾಗದಲ್ಲಿ ರೈತರು ಅಡ್ಡಿಪಡಿಸುತ್ತಿದ್ದಾರೆ. ಎಷ್ಟೇ ಮನವೊಲಿಸಿದರು ಕೆಲಸಕ್ಕೆ ಸಹಕಾರ ನೀಡುತ್ತಿಲ್ಲವೆಂದು ಇಇ ಪುಟ್ಟಸ್ವಾಮಿ ಶಾಸಕರಿಗೆ ಹೇಳಿದರು. ಸರ್ಕಾರ ನಿಗದಿ ಮಾಡಿರುವಂತೆ ರೈತರ ಭೂಮಿಗೆ ಹಣ ಮತ್ತು ಮರಗಿಡಗಳಿಗೆ ಪರಿಹಾರವನ್ನು ಕಲ್ಪಿಸಲಾಗುತ್ತಿದೆ. ಅದಕ್ಕೆ ಒಪ್ಪದೇ ಇದ್ದಲ್ಲಿ ಕಾನೂನು ಪ್ರಕಾರ ಕ್ರಮವಹಿಸಿ ಪೈಪ್ ಲೈನ್ ಅಳವಡಿಸಬೇಕೆಂದು ಶಾಸಕರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಒಟ್ಟು 11 ಎಕರೆ ಭೂಸ್ವಾಧೀನ ಪಡೆದ ರೈತರಿಗೆ ಪರಿಹಾರ ನೀಡಲು ಅಗತ್ಯವಾದ 9 ಕೋಟಿ ರೂ. ಹಣವನ್ನು ಮೀಸಲಿರಿಸಲಾಗಿದೆ. ಬಹುತೇಕ ಮಂದಿ ಹಣ ಕೂಡ ಪಡೆದುಕೊಂಡಿದ್ದಾರೆ. ಕೆಲ ರೈತರು ಸಲ್ಲದ ನೆಪವೊಡ್ಡಿ ಕೆಲಸಕ್ಕೆ ಅಡ್ಡಿಪಡಿಸುತ್ತಿರುವುದು ಗೊತ್ತಿದೆ. ನೇರ ಖರೀದಿ ಮೂಲಕ ಹಣ ಪಡೆದುಕೊಂಡರೇ ಅವರಿಗೆ ಒಳಿತು. ಇಲ್ಲವಾದರೇ ಅವರ ಖಾತೆಗೆ ಹಣ ಜಮಾ ಮಾಡಿ ಭೂಮಿಸ್ವಾಧೀನಕ್ಕೆ ಪಡೆದು ಕೆಲಸ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಪಾಲಕ ಇಂಜಿನಿಯರ್ ಪುಟ್ಟಸ್ವಾಮಿ, ಎಇ ದೀಪಕ್, ಗುತ್ತಿಗೆದಾರ, ಗ್ರಾಮಸ್ಥರು ಹಾಜರಿದ್ದರು.

# ಮೇ 15ಕ್ಕೆ ಅರಕಲಗೂಡಿನಲ್ಲಿ ಅಂಬೇಡ್ಕರ್ ಹಬ್ಬ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಸ್ವಸ್ಥ ಸಮಾಜ ನಿರ್ಮಾಣ ಸಮಿತಿಯಿಂದ ತಾಲ್ಲೂಕಿನ ರಾಮನಾಥಪುರದ ಭಾಗ್ಯಶ್ರೀ ಕಲ್ಯಾಣ ಮಂಟಪದಲ್ಲಿ ಮೇ 15ರಂದು ಕಣ್ಣಿನ ಉಚಿತ ತಪಾಸಣಾ ಶಿಬಿರ ಹಾಗೂ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ಅಧ್ಯಕ್ಷ ಪ್ರದೀಪ್ ರಾಮಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಶುಕ್ರವಾರ ಬೆಳಿಗ್ಗೆ 7 ರಿಂದ ಮಧ್ಯಾಹ್ನ 12 ಗಂಟೆ ವರೆಗೆ ಕೊಯಮತ್ತೂರಿನ ಅರವಿಂದ ಕಣ್ಣಿನ ಆಸ್ಪತ್ರೆಯ ತಜ್ಞ ವೈದ್ಯರು ಕಣ್ಣಿನ ಸಮಸ್ಯೆಗಳ ಕುರಿತು ತಪಾಸಣೆ ನಡೆಸಿ ಚಿಕಿತ್ಸೆ ಮತ್ತು ಸಲಹೆ ನೀಡುವರು. ಶಸ್ತ್ರ ಚಿಕಿತ್ಸೆ ಅಗತ್ಯವಿದ್ದವರಿಗೆ ಕೊಯಮತ್ತೂರಿನ ಆಸ್ಪತ್ರೆಗೆ ಕರೆದೊಯ್ದು ಉಚಿತವಾಗಿ ಚಿಕಿತ್ಸೆ ನಡೆಸಲಾಗುವುದು. ಕಳೆದ ಮಾರ್ಚ್‌ನಲ್ಲಿ ಪಟ್ಟಣದಲ್ಲಿ ಸಮಿತಿ ಉಚಿತ ನೇತ್ರ ಚಿಕಿತ್ಸಾ ಶಿಬಿರ ಹಮ್ಮಿಕೊಂಡಿತ್ತು. ಹಲವರು ಚಿಕಿತ್ಸೆ ಪಡೆಯಲು ಸಾಧ್ಯವಾಗದೆ ಇನ್ನೊಮ್ಮೆ ಶಿಬಿರ ಏರ್ಪಡಿಸುವಂತೆ ಮನವಿ ಮಾಡಿದ್ದ ಹಿನ್ನಲೆಯಲ್ಲಿ ಕೇವಲ ಎರಡು ತಿಂಗಳ ಅವಧಿಯಲ್ಲಿ ಮತ್ತೊಮ್ಮೆ ಶಿಬಿರವನ್ನು ಆಯೋಜಿಸಲಾಗಿದೆ. ಅಗತ್ಯವಿದ್ದವರು ಶಿಬಿರದ ಪ್ರಯೋಜನ ಪಡೆದುಕೊಳ್ಳುವಂತೆ ತಿಳಿಸಿದರು.

# ಪೆಟ್ರೋಲ್ ಬಂಕ್ ಮಾಲೀಕರೊಂದಿಗೆ ಸಂಸದರ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಜಿಲ್ಲೆಯ ಪೆಟ್ರೋಲ್ ಬಂಕ್ ಮಾಲೀಕರು ಹಾಗೂ ಅಧಿಕಾರಿಗಳೊಂದಿಗೆ ನಗರದ ಸಂಸದರ ಕಚೇರಿಯಲ್ಲಿ ಮಂಗಳವಾರ ಸಭೆ ನಡೆಸಿದ ಸಂಸದ ಶ್ರೇಯಸ್ ಪಟೇಲ್ ಅವರು ಕಚ್ಚಾತೈಲ ದಾಸ್ತಾನು ಮತ್ತು ವಿತರಣೆ ಕುರಿತು ಮಾಹಿತಿ ಪಡೆದರು.

ಪೆಟ್ರೋಲ್ ಹಾಗು ಡೀಸೆಲ್ ಪೂರೈಕೆಯಲ್ಲಿ ಈ ವರೆಗೆ ಯಾವುದೇ ವ್ಯತ್ಯಯವಾಗಿಲ್ಲ. ಈ ಹಿಂದೆ ಆಯಿಲ್ ಕಂಪನಿಯವರು ಸಾಲದ ರೂಪದಲ್ಲಿ ಕಚ್ಚಾತೈಲ ಸರಬರಾಜು ಮಾಡುತ್ತಿದ್ದರು. ಇತ್ತೀಚೆಗೆ ಆ ಪ್ರಕ್ರಿಯೆ ಸ್ಥಗಿತಗೊಳಿಸಲಾಗಿದೆ. ಗ್ರಾಹಕರಿಗೆ ಬಾಟಲ್/ಕ್ಯಾನ್‌ಗಳಲ್ಲಿ ಪೆಟ್ರೋಲ್ ಅಥವಾ ಡೀಸೆಲ್ ನೀಡುವುದನ್ನು ಸ್ಥಗಿತಗೊಳಿಸಲಾಗಿದೆ ಎಂದು ಪೆಟ್ರೋಲ್ ಬಂಕ್ ಮಾಲೀಕರು ಹಾಗೂ ಅಧಿಕಾರಿಗಳು ಹೇಳಿದರು.

ಪ್ರಸ್ತುತ ಸುಮಾರು 3 ರಿಂದ 6 ದಿನಗಳ ವರೆಗೆ ಸಾಕಾಗುವಷ್ಟು ಪೆಟ್ರೋಲ್ ಹಾಗು ಡೀಸೆಲ್ ದಾಸ್ತಾನಿದೆ. ದಾಸ್ತಾನು ಪೂರೈಕೆಯಲ್ಲಿ ಯಾವುದೇ ಸಮಸ್ಯೆಯಿಲ್ಲವೆಂದು ಅಧಿಕಾರಿಗಳು ಸ್ಪಷ್ಟಪಡಿಸಿದರು.

ಸಭೆಯಲ್ಲಿ ಮಾತನಾಡಿದ ಸಂಸದ ಶ್ರೇಯಸ್ ಪಟೇಲ್ ಅವರು, ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಪೂರೈಕೆಯಲ್ಲಿ ವ್ಯತ್ಯಯ ಆಗಿಲ್ಲ. ಸಾರ್ವಜನಿಕರು ಆತಂಕಕ್ಕೆ ಒಳಗಾಗಿ ಅನಗತ್ಯವಾಗಿ ಇಂಧನ ಸಂಗ್ರಹಿಸಬಾರದೆಂದು ಮನವಿ ಮಾಡಿದರು.

# ಲಿಂಗಾಪುರದಲ್ಲಿ ಸಂಭ್ರಮದ ಸಿರಿ ಸಿಂಗಾರ ನೇಮೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ತಾಲ್ಲೂಕಿನ ಅರೇಹಳ್ಳಿ ಹೋಬಳಿ ಲಿಂಗಾಪುರ ಗ್ರಾಮದ ಭಗವಾನ್ ಶ್ರೀ ಬಬ್ಬುಸ್ವಾಮಿ ದೈವ ಸ್ಥಾನದಲ್ಲಿ ಬಬ್ಬುಸ್ವಾಮಿ, ತನ್ನಿಮಾನಿಗ, ಚಾಮುಂಡೇಶ್ವರಿ ಹಾಗೂ ಪರಿವಾರ ದೈವಗಳ ಸಿರಿ ಸಿಂಗಾರ ನೇಮೋತ್ಸವ ಅದ್ದೂರಿಯಾಗಿ ನೆರವೇರಿತು.

ಗ್ರಾಮದಲ್ಲಿರುವ ಶಿಲಾಮಯ ದೈವ ಸ್ಥಾನದಲ್ಲಿ ವಾರ್ಷಿಕ ಸಿರಿ ಸಿಂಗಾರದ ನೇಮೋತ್ಸವ ನೋಡಲು ಹಾಸನ ಸೇರಿ ಮಂಗಳೂರು, ಮೈಸೂರು, ಬೆಂಗಳೂರು, ಚಿಕ್ಕಮಗಳೂರು ಹಾಗೂ ನಾನಾ ಭಾಗಗಳಿಂದ ಸಹಸ್ರಾರು ದೈವರಾಧಕರು ಮೂರು ದಿನಗಳ ಕಾಲ ನಡೆದ ನೇಮೋತ್ಸವದಲ್ಲಿ ಪಾಲ್ಗೊಂಡಿದ್ದರು. ಮಾಜಿ ಸಚಿವ ಬಿ.ಶಿವರಾಮ್, ಸಕಲೇಶಪುರ ಶಾಸಕ ಸಿಮೆಂಟ್ ಮಂಜು ಸೇರಿ ಗಣ್ಯರು ಸಿರಿ ಸಿಂಗಾರ ನೇಮೋತ್ಸವಕ್ಕೆ ಸಾಕ್ಷಿಯಾದರು.

ಪರಿವಾರ ದೈವಗಳ ಸಿರಿ ಸಿಂಗಾರ ನೇಮೋತ್ಸವವು ಕಳೆದ ಶನಿವಾರ ಬೆಳಿಗ್ಗೆ ಕಲತಕಂಬೆರ್ಲು, ಚಾಮುಂಡೇಶ್ವರಿ, ರಾಹು, ತನ್ನಿಮಾನಿಗ, ಬಬ್ಬುಸ್ವಾಮಿಯ ದರ್ಶನ ಸೇವೆಯ ಮೂಲಕ ಪ್ರಾರಂಭವಾಯಿತು. ಭಾನುವಾರ ಬೆಳಿಗ್ಗೆ ಗಜಕಂಬ ಸ್ಥಾಪನೆ, ಮಧ್ಯಾಹ್ನ ಚಪ್ಪರ ಏರುವ ಮೂಲಕ ನೇಮೋತ್ಸವಕ್ಕೆ ಚಾಲನೆ ದೊರೆಯಿತು.

ಸೋಮವಾರ ಚಾಮುಂಡೇಶ್ವರಿ ಮತ್ತು ಪರಿವಾರ ದೈವಗಳಾದ ರಾಹು ಗುಳಿಗ ಹಾಗೂ ಕತ್ತಲೆ ಖಾನ ಗುಳಿಗದ ನೇಮೋತ್ಸವನ್ನುಸಹಸ್ರಾರು ಭಕ್ತರು ಕಣ್ತುಂಬಿಕೊಂಡರು. ನಂತರ ರಾತ್ರಿ ಜುಮಾದಿ ಬಂಟ ದೈವಗಳ ನೇಮೋತ್ಸವದ ಮೂಲಕ ಗ್ರಾಮದಲ್ಲಿ ಮೂರು ದಿನಗಳ ಕಾಲ ವಿಜೃಂಭಣೆಯಿಂದ ಮಂಗಳವಾರ ಬೆಳಗಿನ ಜಾವದ ವರೆಗೂ ಪೂಜಾಕೋಲೋತ್ಸವ ನೆರವೇರಿತು.

ರಾಜ್ಯದಲ್ಲಿಯೇ ದೈವಾರಾಧನೆಯ ಪ್ರಸಿದ್ಧ ಸ್ಥಳ ತುಳುನಾಡದ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಪರಂಪರೆಯ ಪ್ರತೀಕ ದೈವಿಕ ಶಕ್ತಿ, ಕಾರಣಿಕ ಮತ್ತು ಭಕ್ತಿಯ ಸಂಕೇತವಾದ ದೈವಗಳ ನೇಮೋತ್ಸವವು ನಿರಂತರ ನಡೆಯುವುದು ಸರ್ವೇ ಸಾಮಾನ್ಯ. ಆದರೆ ಹೆಚ್ಚಾಗಿ ದೇವರ ಆರಾಧನೆ ಮಾಡುವ ಮಲೆನಾಡು ಭಾಗವಾದ ಹಾಸನ ಜಿಲ್ಲೆಯಲ್ಲಿ ದೈವಾರಾಧನೆಯ ನೆಲೆಯಾಗಿರುವ ಅರೇಹಳ್ಳಿ ಹೋಬಳಿಯ ಲಿಂಗಾಪುರ ಗ್ರಾಮದಲ್ಲಿರುವುದು ವಿಶೇಷ. ಇಲ್ಲಿ ನೂರಾರು ವರ್ಷಗಳಿಂದ ದೈವಾರಾಧನೆ ಮಾಡುತ್ತಾ ಸಿರಿ ಸಿಂಗಾರ ನೇಮೋತ್ಸವ ನಡೆಸಲಾಗುತ್ತಿದೆ.

# ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷರಾಗಿ ಎಸ್.ಸಿ.ದಿನೇಶ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಾಲ್ಲೂಕು ಅಧ್ಯಕ್ಷರಾಗಿ ಎಸ್.ಸಿ. ದಿನೇಶ್ ಅವಿರೋಧ ಆಯ್ಕೆಯಾದರು.

ಕಳೆದ 10 ವರ್ಷಗಳ ತಾಲ್ಲೂಕು ಅಧ್ಯಕ್ಷರಾಗಿದ್ದ ಹಾಗೂ ಪ್ರಸ್ತುತ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕ ಉಪಾಧ್ಯಕ್ಷರಾಗಿರುವ ಬಿ.ಜಿ.ಯತೀಶ್, ಜಿಲ್ಲಾ ನಿರ್ದೇಶಕರಾದ ರೇಖಾ ಸುರೇಶ್ ಹಾಗೂ ಶಾರದಾ ಗುರುಮೂರ್ತಿ ಉಪಸ್ಥಿತಿಯಲ್ಲಿ ಚುನಾವಣಾಧಿಕಾರಿ ಉಮಾಪತಿ ಅವರು ಅವಿರೋಧ ಆಯ್ಕೆ ಘೋಷಣೆ ಮಾಡಿದರು.

ಈ ವೇಳೆ ಮಲೆನಾಡು ವೀರಶೈವ ಸಮಾಜ ಅಧ್ಯಕ್ಷ ಧರ್ಮಪ್ಪ, ಉಪಾಧ್ಯಕ್ಷ ಗಗನ್, ನಿರ್ದೇಶಕರಾದ ಪ್ರಶಾಂತ್, ಚೇತನ್ ಸುರೇಶ್, ನಾಗೇಶ್ ಹಾಗೂ ಚಂದ್ರಶೇಖರ್ ಭಾಗವಹಿಸಿದ್ದರು.

ಯುವ ವೇದಿಕೆಯ ಅಧ್ಯಕ್ಷ ಮಳಲಿ ಸ್ವಾಮಿ, ಧರ್ಮರಾಜು ಸೇರಿ ವಿವಿಧ ಅಂಗ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸದಸ್ಯರು ನೂತನ ಅಧ್ಯಕ್ಷರಿಗೆ ಶುಭಾಶಯ ಕೋರಿದರು.

# 28 ಗ್ರಾಂ ತೂಕದ ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪಟ್ಟಣದ ಬಸ್ ನಿಲ್ದಾಣದಲ್ಲಿ ಬಸ್ ಹತ್ತುವಾಗ ಮಹಿಳೆ ಗಮನಕ್ಕೆ ಬಾರದಂತೆ ವ್ಯಾನಿಟಿ ಬ್ಯಾಗ್‌ನಲ್ಲಿದ್ದ ಸುಮಾರು 28 ಗ್ರಾಂ ತೂಕದ ಚಿನ್ನಾಭರಣ ಕದ್ದಿರುವ ಘಟನೆ ನಡೆದಿದೆ.

ಬೆಂಗಳೂರಿನ ಯಲಹಂಕ ನಿವಾಸಿ ಇಂದಿರಾ ಆಭರಣ ಕಳೆದುಕೊಂಡವರು. ಮೇ 11ರಂದು ಚಾಮಡಿಹಳ್ಳಿ ಗ್ರಾಮದಲ್ಲಿ ಮದುವೆ ಸಮಾರಂಭ ಮುಗಿಸಿಕೊಂಡು ಬೆಂಗಳೂರಿಗೆ ಹೊರಟಿದ್ದರು. ಪ್ರಯಾಣಿಕರ ನೂಕುನುಗ್ಗಲಿನ ನಡುವೆ ಬಸ್ ಏರುವಾಗ ವ್ಯಾನಿಟಿ ಬ್ಯಾಗ್‌ನಲ್ಲಿಟ್ಟಿದ್ದ 9 ಗ್ರಾಂ ತೂಕದ ಚೈನ್, 10 ಗ್ರಾಂ ತೂಕದ ಓಲೆ ಜುಮುಕಿ, 9 ಗ್ರಾಂನ ಓಲೆ ಮಾಟಿ ಕದ್ದಿದ್ದಾರೆ. ಕಳುವಾಗಿರುವ ಚಿನ್ನಾಭರಣ ಮೌಲ್ಯ 3 ಲಕ್ಷ ರೂ. ಆಗಿದೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಪರಿಚಿತ ವಾಹನ ಡಿಕ್ಕಿ: ಬೈಕ್ ಸವಾರ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಹಿಂದಿನಿಂದ ಬಂದ ಅಪರಿಚಿತ ವಾಹನ ಡಿಕ್ಕಿಯಾಗಿ ಬೈಕ್ ಮೇಲಿಂದ ಬಿದ್ದ ವ್ಯಕ್ತಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಹಿರೇಬೆಳಗುಲಿ ಕ್ರಾಸ್ ಸಮೀಪ ನಡೆದಿದೆ.

ಅರಕಲಗೂಡು ಪಟ್ಟಣದ ಸುಭಾಷ್ ನಗರ ನಿವಾಸ ನಿಂಗರಾಜು ಮೃತರು. ಮೇ 10ರಂದು ಹಾಸನದಿಂದ ಹೊಳೆನರಸೀಪುರಕ್ಕೆ ಹೋಗುತ್ತಿದ್ದಾಗ ಹಿಂದಿನಿಂದ ಬಂದ ವಾಹನ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ನಿಂಗರಾಜು ಅವರು ಬೈಕ್ ಸಮೇತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೋಡಿರುವ 4 ಅಡಿ ಆಳದ ಚರಂಡಿಗೆ ಬಿದ್ದಿದ್ದಾರೆ. ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಯಗಚಿ ನದಿಗೆ ಸೇತುವೆ: ಇಂದು ಸಚಿವರೊಂದಿಗೆ ಮತ್ತೊಂದು ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ಹೊಳೆ ಬೀದಿಯ ಯಗಚಿ ನದಿಗೆ ಸೇತುವೆ ನಿರ್ಮಾಣ ಸಂಬಂಧ ಲೋಕೋಪಯೋಗಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದು, ಮೇ 14ರಂದು ಸಚಿವ ಸತೀಶ್ ಜಾರಕಿಹೊಳಿ ಅವರೊಂದಿಗೆ ಚರ್ಚಿಸಲಾಗುವುದೆಂದು ಶಾಸಕ ಹೆಚ್.ಕೆ.ಸುರೇಶ್ ಹೇಳಿದ್ದಾರೆ.

ಬೆಂಗಳೂರಿನ ಲೋಕೋಪಯೋಗಿ ಕಚೇರಿಯಲ್ಲಿ ಮಂಗಳವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಶಾಸಕರು, ಕಾಮಗಾರಿ ಕುರಿತು ವರದಿ ತಯಾರಿಸುವಂತೆ ಸೂಚಿಸಿದರು.

ಯಗಚಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣಕ್ಕೆ ಅನುದಾನ ಮಂಜೂರಾಗಿದೆ.

ಯೋಜನಾ ವರದಿ ಅಂತಿಮಗೊಂಡ ಬಳಿಕ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾಗುವುದು. ಶೀಘ್ರವೇ ಟೆಂಡರ್ ಕರೆದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಂದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಗುವುದು ಎಂದರು. ಬೇಲೂರು ವಿಶ್ವ ವಿಖ್ಯಾತ ಪ್ರವಾಸಿ ತಾಣ. ಪ್ರತಿನಿತ್ಯ ದೇಶ ವಿದೇಶಗಳಿಂದ ಸಾವಿರಾರು ಪ್ರವಾಸಿಗರು ಬರುತ್ತಾರೆ.

ಆದರೆ ಬೇಲೂರು ಪಟ್ಟಣ ಪ್ರವೇಶಿಸಬೇಕೆಂದರೆ ಇರುವ ಒಂದೇ ಸೇತುವೆ ಹಾಗೂ ಒಂದೇ ಮುಖ್ಯ ರಸ್ತೆ ಮೇಲೆಯೇ ಸಾಗಬೇಕು. ಜೊತೆಗೆ ಹಬ್ಬ ಹರಿದಿನಗಳಂದು ದೇವರ ಉತ್ಸವ ಹಾಗು ಯಾವುದಾದರೂ ಪ್ರತಿಭಟನೆಗಳಾದರೆ ಮುಖ್ಯರಸ್ತೆ ಸಂಪೂರ್ಣವಾಗಿ ಬಂದ್ ಆಗುತ್ತದೆ. ಅದರಿಂದ ಸಂಚಾರ ದಟ್ಟಣೆ ಉಂಟಾಗಿ ಸಾರ್ವಜನಿಕರಿಗೆ ಭಾರೀ ತೊಂದರೆಯಾಗುತ್ತದೆ. ಈ ಎಲ್ಲಾ ಸಮಸ್ಯೆಯನ್ನು ಅಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದರು.

**ಸಚಿವರಿಂದಲೂ ಸ್ಥಳ ಪರಿಶೀಲನೆ:** ಯಗಚಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಿಸಬೇಕೆಂಬ ಕೂಗು ಇಂದು ನಿನ್ನೆಯದಲ್ಲ. ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಅವರು ಈ ಸಂಬಂಧ ಹಲವು ಸಭೆ ನಡೆಸಿದ್ದರು. ನಂತರ ಅಧಿಕಾರಕ್ಕೆ ಬಂದ ಹೆಚ್.ಕೆ.ಸುರೇಶ್ ಅವರೂ ಆ ನಿಟ್ಟಿನಲ್ಲಿ ಪ್ರಯತ್ನ ಮುಂದುವರಿಸಿದ್ದಾರೆ. ಇತ್ತೀಚೆಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಪಟ್ಟಣಕ್ಕೆ ಆಹ್ವಾನಿಸಿ ಸಮಸ್ಯೆ ಮನವರಿಕೆ ಮಾಡಿಕೊಡಲಾಗಿತ್ತು. ಈ ಹಿನ್ನಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಸೇತುವೆ ನಿರ್ಮಾಣಕ್ಕಾಗಿ 50 ಕೋಟಿ ರೂ. ಅನುದಾನ ಮಂಜೂರಾಗಿತ್ತು. ಆದರೆ ತಾಂತ್ರಿಕ ಕಾರಣಗಳಿಂದ ಕಾಮಗಾರಿ ಪ್ರಾರಂಭವಾಗಲಿಲ್ಲ. ಶಾಸಕ ಹೆಚ್.ಕೆ.ಸುರೇಶ್ ಅವರು, ಸಚಿವರು ಹಾಗೂ ಅಧಿಕಾರಿಗಳನ್ನು ಪದೇ ಪದೇ ಭೇಟಿಯಾಗಿ ಕಾಮಗಾರಿ ಆರಂಭಕ್ಕೆ ಪ್ರಯತ್ನ ಆರಂಭಿಸಿದ್ದಾರೆ.

# ಅಪರಿಚಿತ ವಾಹನ ಡಿಕ್ಕಿ ಬೈಕ್ ಸವಾರ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಹಿಂದಿನಿಂದ ಬಂದ ಅಪರಿಚಿತ ವಾಹನ ಡಿಕ್ಕಿಯಾಗಿ ಬೈಕ್ ಮೇಲಿಂದ ಬಿದ್ದ ವ್ಯಕ್ತಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಹಿರೇಬೆಳಗುಲಿ ಕ್ರಾಸ್ ಸಮೀಪ ನಡೆದಿದೆ. ಅರಕಲಗೂಡು ಪಟ್ಟಣದ ಸುಭಾಷ್ ನಗರ ನಿವಾಸ ನಿಂಗರಾಜು ಮೃತರು. ಮೇ 10ರಂದು ಹಾಸನದಿಂದ ಹೊಳೆನರಸೀಪುರಕ್ಕೆ ಹೋಗುತ್ತಿದ್ದಾಗ ಹಿಂದಿನಿಂದ ಬಂದ ವಾಹನ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ನಿಂಗರಾಜು ಅವರು ಬೈಕ್ ಸಮೇತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೋಡಿರುವ 4 ಅಡಿ ಆಳದ ಚರಂಡಿಗೆ ಬಿದ್ದಿದ್ದಾರೆ. ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಮೇ-14

1948: ಇಸ್ರೇಲ್ ದೇಶದ ಸ್ಥಾಪನೆ ಘೋಷಿಸಲಾಯಿತು.

1973: ಅಮೆರಿಕದ ಮೊದಲ ಬಾಹ್ಯಾಕಾಶ ಕೇಂದ್ರ, Skylab ಅನ್ನು ಉಡಾವಣೆ ಮಾಡಲಾಯಿತು.

1998: ಭಾರತದ ಪೋಕ್ರಾನ್ 2 ಅಣು ಪರೀಕ್ಷೆಗಳ ಎರಡನೇ ಹಂತ ಯಶಸ್ವಿಯಾಗಿ ನೆರವೇರಿತು.

2004: ಮನಮೋಹನ್ ಸಿಂಗ್ ಅವರು ಭಾರತದ ಪ್ರಧಾನಮಂತ್ರಿಯಾಗಿ ಆಯ್ಕೆಯಾದರು.

**ಜನನ**

1686: Daniel Gabriel Fahrenheit

1923: ಖ್ಯಾತ ಚಲನಚಿತ್ರ ನಿರ್ದೇಶಕ Mrinal Sen

1963: Chandrababu Naidu

**ನಿಧನ**

1964: ಭಾರತದ ಮೊದಲ ಪ್ರಧಾನಮಂತ್ರಿ, ಜವಾಹರಲಾಲ್ ನೆಹರು

# ಪ್ರಜಾಪ್ರಭುತ್ವ ಪಯಣದಲ್ಲಿ ವಿಜಯ್ ಹೊಸ ಅಧ್ಯಾಯ

**– ವಿಶ್ವಾಸ್ ಡಿ ಗೌಡ**



ಪ್ರಜಾಪ್ರಭುತ್ವದಲ್ಲಿ ನಾಯಕತ್ವ ಎಂಬುದು ಕೇವಲ ಅಧಿಕಾರದ ಸ್ಥಾನವಲ್ಲ. ಅದು ಜನರ ನಂಬಿಕೆ, ಆಶಯ ಮತ್ತು ನಿರೀಕ್ಷೆಗಳ ಪ್ರತೀಕವೂ ಹೌದು. ಇತ್ತೀಚೆಗೆ ಮುಖ್ಯಮಂತ್ರಿ ಸ್ಥಾನಕ್ಕೇರಿರುವ ವಿಜಯ್ ಅವರ ರಾಜಕೀಯ ಪಯಣವೂ ಇದೇ ನಿಟ್ಟಿನಲ್ಲಿ ಚರ್ಚೆಗೆ ಗ್ರಾಸವಾಗದೆ. ಶಾಂತ ಹಾಗೂ ಪ್ರಜಾಸತ್ತಾತ್ಮಕ ರೀತಿಯಲ್ಲಿ ನಡೆದಿರುವುದು ಗಮನಾರ್ಹ ಸಂಗತಿ. ಸಾಮಾನ್ಯವಾಗಿ ರಾಜ್ಯ ರಾಜಕಾರಣದಲ್ಲಿ ನಾಯಕತ್ವ ಬದಲಾವಣೆಗಳು ನಡೆದಾಗ ಹಲವಾರು ಊಹಾಪೋಹಗಳು, ಪರ-ವಿರೋಧದ ಚರ್ಚೆಗಳು, ಪಕ್ಷೀಯ ಸಂಘರ್ಷಗಳು ಹಾಗೂ ರಾಜಕೀಯ ಗೊಂದಲಗಳು ಮೂಡುವುದು ಸಹಜ. ಆದರೆ ಈ ಬಾರಿ ನಡೆದ ಬೆಳವಣಿಗೆಗಳು ಹೆಚ್ಚು ವಿವಾದಾತ್ಮಕವಾಗದೆ, ವ್ಯವಸ್ಥಿತ ರೀತಿಯಲ್ಲಿ ನಡೆದಿರುವುದು ರಾಜಕೀಯ ಪ್ರೌಢಿಮೆಯ ಸಂಕೇತವಾಗಿ ಕಾಣುತ್ತದೆ.

ಒಂದು ಸರ್ಕಾರದ ರಚನೆ ಎಂದರೆ ಕೇವಲ ಒಬ್ಬ ವ್ಯಕ್ತಿಯ ಆಯ್ಕೆ ಮಾತ್ರವಲ್ಲ; ಅದರ ಹಿಂದೆ ಪಕ್ಷದ ಒಳಚರ್ಚೆಗಳು, ಶಾಸಕರ ಅಭಿಪ್ರಾಯಗಳು, ಜನರ ನಿರೀಕ್ಷೆಗಳು ಮತ್ತು ಆಡಳಿತದ ಸ್ಥಿರತೆಯ ಅವಶ್ಯಕತೆಗಳು ಕಾರ್ಯನಿರ್ವಹಿಸುತ್ತವೆ. ಮುಖ್ಯಮಂತ್ರಿ ವಿಜಯ್ ಅವರ ಆಯ್ಕೆಯಲ್ಲಿಯೂ ಈ ಅಂಶಗಳು ಪ್ರಮುಖ ಪಾತ್ರವಹಿಸಿದ್ದವು ಎಂದು ಹೇಳಬಹುದು. ಪ್ರಜಾಪ್ರಭುತ್ವದಲ್ಲಿ ಯಾವುದೇ ನಾಯಕತ್ವ ಬದಲಾವಣೆ ನಡೆದರೂ ಅದು ಸಂವಿಧಾನಾತ್ಮಕ ಚೌಕಟ್ಟಿನೊಳಗೆ ನಡೆದರೆ, ಜನರಲ್ಲಿ ವಿಶ್ವಾಸ ಹೆಚ್ಚುತ್ತದೆ. ಇದೇ ಕಾರಣಕ್ಕೆ ಈ ಬೆಳವಣಿಗೆ ಅನಗತ್ಯ ರಾಜಕೀಯ ಗದ್ದಲಗಳಿಗೆ ಕಾರಣವಾಗದೆ ಸಾಗಿರುವುದು ರಾಜ್ಯ ರಾಜಕಾರಣಕ್ಕೆ ಒಳ್ಳೆಯ ಸೂಚನೆ.

ಇಂದಿನ ರಾಜಕೀಯ ಪರಿಸ್ಥಿತಿಯಲ್ಲಿ ಸಾಮಾಜಿಕ ಜಾಲತಾಣಗಳು ಹಾಗೂ ವಿವಿಧ ವೇದಿಕೆಗಳ ಮೂಲಕ ಸಣ್ಣ ವಿಚಾರಗಳೇ ದೊಡ್ಡ ಚರ್ಚೆಗಳಾಗಿ ಮಾರ್ಪಡುವ ಸಂದರ್ಭಗಳು ಹೆಚ್ಚಾಗಿವೆ. ಆದರೆ ಮುಖ್ಯಮಂತ್ರಿ ವಿಜಯ್ ಅವರ ಅಧಿಕಾರ ಸ್ವೀಕಾರದ ಸಂದರ್ಭದಲ್ಲಿ ರಾಜಕೀಯ ಪರಸ್ಪರ ಆರೋಪ-ಪ್ರತ್ಯಾರೋಪಗಳಿಗಿಂತ ಆಡಳಿತದ ನಿರಂತರತೆ ಮತ್ತು ಅಭಿವೃದ್ಧಿಯ ಚರ್ಚೆಗಳೇ ಹೆಚ್ಚು ಗಮನ ಸೆಳೆದವು. ಇದು ಜನರು ಈಗ ಸ್ಥಿರತೆ ಹಾಗೂ ಫಲಿತಾಂಶಗಳನ್ನು ಹೆಚ್ಚು ಬಯಸುತ್ತಿರುವುದನ್ನು ಸೂಚಿಸುತ್ತದೆ.

ಒಬ್ಬ ನಾಯಕ ಅಧಿಕಾರಕ್ಕೆ ಬಂದ ನಂತರ ಅವರ ಮುಂದಿರುವ ಅತಿದೊಡ್ಡ ಸವಾಲು ಜನರ ನಿರೀಕ್ಷೆಗಳನ್ನು ಈಡೇರಿಸುವುದು. ರಾಜ್ಯದ ಅಭಿವೃದ್ಧಿ, ರೈತರ ಸಮಸ್ಯೆಗಳು, ಯುವಕರ ಉದ್ಯೋಗ, ಶಿಕ್ಷಣ, ಆರೋಗ್ಯ ಮತ್ತು ಮೂಲಭೂತ ಸೌಕರ್ಯಗಳಂತಹ ವಿಷಯಗಳಿಗೆ ಆದ್ಯತೆ ನೀಡುವ ಆಡಳಿತ ಜನರಿಗೆ ಅಗತ್ಯವಾಗಿದೆ. ಮುಖ್ಯಮಂತ್ರಿ ವಿಜಯ್ ಅವರ ಹೊಸ ಜವಾಬ್ದಾರಿಯೂ ಇದೇ ದಿಕ್ಕಿನಲ್ಲಿ ಸಾಗಬೇಕಿದೆ. ನಾಯಕತ್ವ ಬದಲಾವಣೆ ಎಂದರೆ ಕೇವಲ ವ್ಯಕ್ತಿ ಬದಲಾವಣೆ ಅಲ್ಲ; ಅದು ಹೊಸ ಚಿಂತನೆ, ಹೊಸ ಕಾರ್ಯಶೈಲಿ ಮತ್ತು ಹೊಸ ನಿರೀಕ್ಷೆಗಳ ಆರಂಭವೂ ಆಗಿದೆ.

ರಾಜಕೀಯದಲ್ಲಿ ವ್ಯಕ್ತಿಗಳಿಗಿಂತ ವ್ಯವಸ್ಥೆಯೇ ದೊಡ್ಡದು ಎಂಬ ಮಾತು ಬಹಳ ಪ್ರಾಮುಖ್ಯತೆಯನ್ನು ಹೊಂದಿದೆ. ಯಾವುದೇ ಸರ್ಕಾರವು ಜನರ ವಿಶ್ವಾಸವನ್ನು ಗಳಿಸಬೇಕಾದರೆ ಪಾರದರ್ಶಕತೆ, ಸಮನ್ವಯ ಮತ್ತು ಜನಪರ ಆಡಳಿತ ಅತ್ಯಗತ್ಯ. ಮುಖ್ಯಮಂತ್ರಿ ವಿಜಯ್ ಅವರ ಆಡಳಿತವೂ ಇದೇ ಮೌಲ್ಯಗಳ ಮೇಲೆ ಸಾಗಿದರೆ, ಅದು ಜನರಲ್ಲಿ ವಿಶ್ವಾಸವನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ.

ಒಟ್ಟಾರೆಯಾಗಿ ನೋಡಿದರೆ, ಮುಖ್ಯಮಂತ್ರಿ ವಿಜಯ್ ಅವರ ಅಧಿಕಾರ ಸ್ವೀಕಾರವು ಗೊಂದಲಗಳಿಗಿಂತ ಶಾಂತ ರಾಜಕೀಯ ಪ್ರಕ್ರಿಯೆಯ ಉದಾಹರಣೆಯಾಗಿ ಕಾಣುತ್ತದೆ. ಪ್ರಜಾಪ್ರಭುತ್ವದಲ್ಲಿ ಅಧಿಕಾರ ಬದಲಾವಣೆಗಳು ಸಹಜ; ಆದರೆ ಅವು ಜನರಲ್ಲಿ ಭರವಸೆ ಮೂಡಿಸುವ ರೀತಿಯಲ್ಲಿ ನಡೆದಾಗ ಮಾತ್ರ ಆಡಳಿತದ ಮೇಲೆ ನಂಬಿಕೆ ಹೆಚ್ಚುತ್ತದೆ. ಮುಂದಿನ ದಿನಗಳಲ್ಲಿ ಸರ್ಕಾರ ಜನರ ನಿರೀಕ್ಷೆಗಳಿಗೆ ತಕ್ಕಂತೆ ಕಾರ್ಯನಿರ್ವಹಿಸಿ ಅಭಿವೃದ್ಧಿ ಮತ್ತು ಸಮನ್ವಯದ ದಾರಿಗೆ ಸಾಗಲಿ ಎಂಬ ಆಶಯ ಎಲ್ಲರಲ್ಲಿಯೂ ಇದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248